**ಕರ್ನಾಟಕ ಸರ್ಕಾರ**

**ಸಂಖ್ಯೆ:** ಸಿಆಸುಇ ಆಸು 32 ಈಕಾಅ 2021

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ,
ಬೆಂಗಳೂರು, ದಿನಾಂಕ: 21-04-2021.

**ಸುತ್ತೋಲೆ**

**ವಿಷಯ:** "ರಾಜ್ಯ ಸರ್ಕಾರಿ ನೌಕರರ ದಿನಾಚರಣೆ" ಕಾರ್ಯಕ್ರಮವನ್ನು ಮುಂದೂಡಿರುವ ಬಗ್ಗೆ.

*****

ಸರ್ಕಾರಿ ಆದೇಶ ಸಂಖ್ಯೆ: ಸಿಆಸುಇ ಆಸು 33 ಈಕಾಅ 2020, ದಿನಾಂಕ: 18.01.2021ರಲ್ಲಿ ಸರ್ಕಾರವು ಪ್ರತಿ ವರ್ಷ ಏಪ್ರಿಲ್ 21 ರಂದು " ನಾಗರಿಕ ಸೇವಾ ದಿನ" ವನ್ನು "ರಾಜ್ಯ ಸರ್ಕಾರಿ ನೌಕರರ ದಿನಾಚರಣೆ" ಯನ್ನಾಗಿ ಆಚರಿಸಲು ಹಾಗೂ ಅತ್ಯುತ್ತಮ ಸೇವೆ ಸಲ್ಲಿಸಿದ ಅಧಿಕಾರಿ / ನೌಕರರಿಗೆ ರಾಜ್ಯ ಹಾಗೂ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಯನ್ನು ಅಂದು ಪ್ರದಾನ ಮಾಡಲು ಆದೇಶಿಸಲಾಗಿದೆ.

ಆದರೆ, ಕೋವಿಡ್-19ರ 2ನೇ ಅಲೆಯು ರಾಜ್ಯದೆಲ್ಲೆಡೆ ಹೆಚ್ಚಾಗುತ್ತಿರುವ ಕಾರಣ ಏಪ್ರಿಲ್ 21 ರಂದು ನಿಗದಿಯಾಗಿದ್ದ "ರಾಜ್ಯ ಸರ್ಕಾರಿ ನೌಕರರ ದಿನಾಚರಣೆ" ಕಾರ್ಯಕ್ರಮವನ್ನು **ಮುಂದೂಡಲು ತೀರ್ಮಾನಿಸಲಾಗಿದೆ.** ಸದರಿ ಕಾರ್ಯಕ್ರಮದ ಆಯೋಜನೆಯ ಕುರಿತು ನಂತರ ತಿಳಿಸಲಾಗುವುದು.

ಸರ್ಕಾರದ ಆದೇಶ ಸಂಖ್ಯೆ: ಸಿಆಸುಇ 105 ಇಆಸು 2011, ದಿನಾಂಕ: 20-11-2012, ತಿದ್ದುಪಡಿ ಆದೇಶ ಸಂಖ್ಯೆ: ಸಿಆಸುಇ 105 ಇಆಸು 2011, ದಿನಾಂಕ: 15-04-2013 ಮತ್ತು ಆದೇಶ ಸಂಖ್ಯೆ: ಸಿಆಸುಇ (ಆಸು) 104 ಇಆಸು 2019, ದಿನಾಂಕ: 07-12-2019 ರಲ್ಲಿ ಸೂಚಿಸಿರುವ ಮಾರ್ಗಸೂಚಿಗಳನ್ವಯ ಜಿಲ್ಲಾ ಮಟ್ಟದ ಸರ್ವೋತ್ತಮ ಸೇವಾ ಪ್ರಶಸ್ತಿಗಾಗಿ ಆನ್‌ಲೈನ್ ಮುಖಾಂತರ ಸಲ್ಲಿಸಿರುವ ನಾಮನಿರ್ದೇಶನಗಳನ್ನು ಮಾತ್ರ ಪರಿಶೀಲಿಸಿ, ನಿಯಮಾನುಸಾರ ಅರ್ಹ ನಾಮ ನಿರ್ದೇಶಿತರನ್ನು ಜಿಲ್ಲಾ ಸರ್ವೋತ್ತಮ ಸೇವಾ ಪ್ರಶಸ್ತಿಗೆ ಆಯ್ಕೆ ಮಾಡಿ, ದಿನಾಂಕ:21-04-2021ರಂದು ಪ್ರಕಟಿಸಬೇಕೆಂದು ಹಾಗೂ ಸದರಿ ಪಟ್ಟಿಯೊಂದಿಗೆ ಅನುದಾನ ಬಿಡುಗಡೆಗಾಗಿ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಬೇಕೆಂದು ಸೂಚಿಸಿದೆ.

**(ಡಾ: ಶಾಲಿನಿ ರಜನೀಶ್)**
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು,
ಸಿಬ್ಬಂದಿ ಮತ್ತು ಆಡಳಿತ ಸುಧಾರಣೆ ಇಲಾಖೆ
(ಆಡಳಿತ ಸುಧಾರಣೆ).

**ಗೆ:**

1. ರಾಜ್ಯದ ಎಲ್ಲಾ ಜಿಲ್ಲಾಧಿಕಾರಿಗಳು.
2. ರಾಜ್ಯಾಧ್ಯಕ್ಷರು, ಕರ್ನಾಟಕ ರಾಜ್ಯ ಸರ್ಕಾರಿ ನೌಕರರ ಸಂಘ, ಕಬ್ಬನ್ ಉದ್ಯಾನವನ, ಬೆಂಗಳೂರು.
3. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.

**ಪ್ರತಿ:**

1)ಮಾನ್ಯ ಮುಖ್ಯಮಂತ್ರಿಗಳ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ,ವಿಧಾನಸೌಧ.
2)ಸರ್ಕಾರದ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ವಿಧಾನಸೌಧ.
3)ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿ ವಿಧಾನ ಸೌಧ.